# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 284 |
| 2 | ಸದಸ್ಯರ ಹೆಸರು | : | ಶ್ರೀ ಮುನಿರಾಜುಗೌಡ. ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 17-02-2022 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ (C&R Rules) ಪ್ರಕಾರ ಮಂಜೂರಾಗಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳ ಸಂಖ್ಯೆ ಎಷ್ಟು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿ (C&R Rules) ಪ್ರಕಾರ 361 ಸಹಾಯಕ ಅಭಿಯಂತರರ ಹುದ್ದೆಗಳು ಹಾಗೂ 108 ಕಿರಿಯ ಅಬಿಯಂತರರ ಹುದ್ದೆಗಳು ಮಂಜೂರಾಗಿರುತ್ತದೆ. |
| ಆ) | ಹಾಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು; | ಪಾಲಿಕೆಯಲ್ಲಿ 265 ಸಹಾಯಕ ಅಭಿಯಂತರರು ಮತ್ತು 67 ಕಿರಿಯ ಅಭಿಯಂತರರು ಕಾರ್ಯ ನಿರ್ವಹಿಸುತ್ತಿದ್ದಾರೆ. |
| ಇ) | ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇವೆಗೆ ಸೇರಿದವರ ಸಂಖ್ಯೆ ಎಷ್ಟು; ಎರವಲು ಸೇವೆ ಮೇರೆಗೆ ನಿಯೋಜಿಸಲ್ಪಟ್ಟವರ ಸಂಖ್ಯೆ ಎಷ್ಟು; | ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್‌ಗಳ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇವೆಗೆ ಸೇರಿದವರ ಸಂಖ್ಯೆ ಹಾಗೂ ಎರವಲು ಸೇವೆ ಮೇರೆಗೆ ನಿಯೋಜಿಸಲ್ಪಟ್ಟವರ ಸಂಖ್ಯೆಯ **ವಿವರಗಳನ್ನು ಅನುಬಂಧ-1 ರಲ್ಲಿ ನೀಡಿದೆ.** |
| ಈ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮೂಲ ಆಡಳಿತಾತ್ಮಕ ಘಟಕವಾದ ವಾರ್ಡ್ ಮಟ್ಟದಲ್ಲಿ ಕಾಮಗಾರಿಗಳ ಅನುಷ್ಠಾನದ ಮೇಲುಸ್ತುವಾರಿ ವಹಿಸಬೇಕಾದ ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್‌ಗಳ ಹುದ್ದೆಗಳು ಗಣನೀಯ ಸಂಖ್ಯೆಯಲ್ಲಿ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |

...2.

| | | |
|---|---|---|
| ಉ) | ಬಂದಿದ್ದಲ್ಲಿ, ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮ ಏನು? | ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದೊಡನೆ ಪತ್ರ ವ್ಯವಹರಣೆ ನಡೆಸಲಾಗುತ್ತಿರುತ್ತದೆ ಹಾಗೂ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಕಡತ ಸಂಖ್ಯೆ: ನಅಇ 213 ಎಂಎನ್‌ಜಿ 2021, ದಿನಾಂಕ: 04-01-2022ರ ಪತ್ರದನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅವಶ್ಯವಿರುವ /ಖಾಲಿ ಇರುವ ಸಹಾಯಕ ಅಭಿಯಂತರರು/ಕಿರಿಯ ಅಭಿಯಂತರರ (ಸಿವಿಲ್) ಹುದ್ದೆಗಳ ಸೇವೆಯನ್ನು ಕಿಯೋನಿಕ್ಸ್ ಸಂಸ್ಥೆಯಿಂದ 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಸೇವೆಯನ್ನು ಪಡೆಯಲು ಅನುಮತಿ ನೀಡಿದ್ದು, ಈ ಸಂಬಂಧ ಕ್ರಮ ವಹಿಸಲಾಗುತ್ತಿರುತ್ತದೆ ಹಾಗೂ ಖಾಲಿ ಇರುವ ಸಹಾಯಕ/ ಕಿರಿಯ ಅಭಿಯಂತರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. |

ನಅಇ 83 ಎಂಎನ್‌ಯು 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

# ಅನುಬಂಧ-1

| ಕ್ರಮ ಸಂಖ್ಯೆ | ಹುದ್ದೆಗಳ ವಿವರ | ಮಂಜೂರಾಗಿರುವ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | | ಒಟ್ಟು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|---|---|
| | | | ಬಿ.ಬಿ.ಎಂ.ಪಿ | ಎರವಲು | | |
| 01 | ಸಹಾಯಕ ಅಭಿಯಂತರರು (ಸಿವಿಲ್) ವಿಭಾಗ-1 | 291 | 93 | 145 | 238 | 53 |
| 02 | ಸಹಾಯಕ ಅಭಿಯಂತರರು (ಸಿವಿಲ್) ವಿಭಾಗ-2 | 70 | 27 | 00 | 27 | 43 |
| | **ಒಟ್ಟು** | **361** | **120** | **145** | **265** | **96** |
| 03 | ಕಿರಿಯ ಅಭಿಯಂತರರು (ಸಿವಿಲ್) | 108 | 11 | 56 | 67 | 41 |